ಅ) ಈ ಪ್ರದೇಶದಲ್ಲಿ ಈಗಾಗಲೇ ಒಳಚರಂಡಿ ವ್ಯವಸ್ಥೆ ಇರುತ್ತದೆ. ಒಳಚರಂಡಿ ವ್ಯವಸ್ಥೆ ಇಲ್ಲದಿರುವ ಭಾಗಗಳಲ್ಲಿ ಬೆಂಗಳೂರು ಮಹಾನಗರಪಾಲಿಕೆಗೆ ಸೂಕ್ತ ಕ್ರಮ ಕೈಗೊಳ್ಳಲು ನಿರ್ದೇಶಿಸಿದೆ.

ಆ) ಉದ್ಭವಿಸುವುದಿಲ್ಲ

ಇ) ಉದ್ಭವಿಸುವುದಿಲ್ಲ

ಈ) ಉದ್ಭವಿಸುವುದಿಲ್ಲ.

ಜಯಮಹಲ್ ವಿಧಾನ ಸಭಾಕ್ಷೇತ್ರಕ್ಕೆ ನೀರು ಸರಬರಾಜು

198 - ಶ್ರೀ ಆರ್. ಕೃಷ್ಣಪ್ಪ (ಜಯಮಹಲ್) : ಮಾನ್ಯ ಮುಖ್ಯಮಂತ್ರಿಯವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

1. *ಬೆಂಗಳೂರಿನ ಜಯಮಹಲ್ ವಿಧಾನಸಭಾ ಕ್ಷೇತ್ರದಲ್ಲಿ ಯಾವ ಯಾವ ಬಡಾವಣೆಗಳಿಗೆ ಕುಡಿಯುವ ನೀರು ಸರಬರಾಜು ಹಾಗೂ ನೈರ್ಮಲೀಕರಣ ಯೋಜನೆಯನ್ನು ತಯಾರು ಮಾಡಲಾಗಿದೆ.*

2. *ಹಾಗಿದ್ದರೆ, ಈ ಯೋಜನೆಯಡಿಯಲ್ಲಿ ಇಲ್ಲಿಯವರೆಗೆ ಜಲಮಂಡಳಿಯ ಖರ್ಚು ಮಾಡಿರುವ ಹಣದ ಪ್ರಮಾಣವೆಷ್ಟು?*

3. *ಜಯಮಹಲ್ ವಿಧಾನಸಭಾ ಕ್ಷೇತ್ರದಲ್ಲಿರುವ ಅಣ್ಣಯ್ಯಪ್ಪ ಬ್ಲಾಕ್ ಮುದ್ದಮ್ಮ ಗಾರ್ಡನ್, ಗಂಗಾನಗರ, (ಉತ್ತರ) ವಸಂತಪ್ಪ ಬ್ಲಾಕ್ ಮುಂತಾದ ಕಡೆಗಳಲ್ಲಿ ಕುಡಿಯುವ ನೀರಿನ ಸೌಲಭ್ಯವಿಲ್ಲದೆ ನಾಗರಿಕರು ವಂಚಿತರಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ?*

4. *ಜಯಮಹಲ್ ವಿಧಾನಸಭಾ ಕ್ಷೇತ್ರದಲ್ಲಿರುವ ಎಲ್ಲಾ ಬಡಾವಣೆಗಳಿಗೆ ಕುಡಿಯುವ ನೀರು ಹಾಗೂ ಒಳಚರಂಡಿ ಸೌಲಭ್ಯಗಳನ್ನು ಒದಗಿಸಲು ಸರ್ಕಾರದವರು ಕೈಗೊಳ್ಳಲಿರುವ ಕ್ರಮಗಳೇನು?*

ಶ್ರೀ ಹೆಚ್.ಡಿ. ದೇವೇಗೌಡ (ಮುಖ್ಯಮಂತ್ರಿಯವರು) :

1. ಜಯಮಹಲ್ ಕ್ಷೇತ್ರದ ಕೌಸರ್‌ನಗರ ಹಾಗೂ ಎಕ್ಸ್-ಸರ್ವೀಸ್‌ಮೆನ್ ಬಡಾವಣೆಗಳಿಗೆ ನೀರು ಸರಬರಾಜು ಒದಗಿಸುವ ಯೋಜನೆಯನ್ನು ಈಗಾಗಲೇ ಕೈಗೆತ್ತಿಕೊಳ್ಳಲಾಗಿದೆ. ಇದಲ್ಲದೆ, ಉಳಿದ ಪ್ರದೇಶಗಳಿಗೆ ನೀರು ಸರಬರಾಜು ಮತ್ತು ನೈರ್ಮಲೀಕರಣ ವ್ಯವಸ್ಥೆಯ ಯೋಜನೆಯನ್ನು ತಯಾರಿಸಲಾಗಿದೆ.

2. ಕೌಸರ್‌ನಗರಕ್ಕೆ 9.5 ಲಕ್ಷ ರೂಪಾಯಿಗಳು ಹಾಗೂ ಎಕ್ಸ್-ಸರ್ವಿಸ್‌ಮೆನ್ ಬಡಾವಣೆ 3.00 ಲಕ್ಷ ರೂಪಾಯಿಗಳನ್ನು ಇದುವರೆಗೆ ಖರ್ಚು ಮಾಡಲಾಗಿದೆ.

3. ಬಂದಿದೆ.

4. ಆರ್ಥಿಕ ಪರಿಸ್ಥಿತಿಯನ್ನು ಗಮನದಲ್ಲಿಟ್ಟುಕೊಂಡು ಸರ್ಕಾರ ಸೂಕ್ತ ಕ್ರಮ ಕೈಗೊಳ್ಳುವುದು.

ಜಯಮಹಲ್ ಕ್ಷೇತ್ರದಲ್ಲಿ ರಸ್ತೆ ವಿಸ್ತರಣೆ

199 - ಶ್ರೀ ಆರ್. ಕೃಷ್ಣಪ್ಪ (ಜಯಮಹಲ್) : ಮಾನ್ಯ ಮುಖ್ಯಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬೆಂಗಳೂರು ನಗರದ ಜಯಮಹಲ್ ಕ್ಷೇತ್ರದಲ್ಲಿರುವ ಸುಲ್ತಾನ್‌ಪಾಳ್ಯ ಹಾಗೂ ಮುನಿರೆಡ್ಡಿಪಾಳ್ಯಕ್ಕೆ ನೇರವಾಗಿ ರಸ್ತೆ ಸಂಪರ್ಕ ಕಲ್ಪಿಸಲು ಬೇಕಾದಂತಹ ಜಮೀನು ರಕ್ಷಣಾ ಇಲಾಖೆಗೆ ಸೇರಿಸುವುದು ನಿಜವಲ್ಲವೇ?

ಆ) ಹಾಗಿದ್ದಲ್ಲಿ ಈ ರಸ್ತೆಯನ್ನು ನಿರ್ಮಿಸಲು ಬೇಕಾದಂತಹ ರಕ್ಷಣಾ ಇಲಾಖೆ ಜಮೀನನ್ನು ಸ್ವಾಧೀನಪಡಿಸಿಕೊಳ್ಳಲು ಸರ್ಕಾರದವರು ಕೈಗೊಂಡಿರುವ ಕ್ರಮಗಳೇನು?

ಶ್ರೀ ಹೆಚ್.ಡಿ. ದೇವೇಗೌಡ (ಮುಖ್ಯಮಂತ್ರಿಗಳು) :

ಅ) ಹೌದು.

ಆ) ರಕ್ಷಣಾ ಇಲಾಖೆಯಿಂದ ಪಡೆದುಕೊಳ್ಳಲಿರುವ ಭೂಮಿಗೆ ರಕ್ಷಣಾ ಇಲಾಖೆಯವರು ಬದಲಿ ಭೂಮಿಯನ್ನು ಕೋರುತ್ತಿದ್ದಾರೆ. ಆದರೆ ಬದಲಿ ಭೂಮಿ ಲಭ್ಯವಿಲ್ಲ. ಆದ್ದರಿಂದ ಸೂಕ್ತ ಪರಿಹಾರವನ್ನು ನೀಡುವ ಷರತ್ತಿನ ಮೇಲೆ ಅಗತ್ಯ ಜಮೀನನ್ನು ಬಿಟ್ಟುಕೊಡುವಂತೆ ರಕ್ಷಣಾ ಇಲಾಖೆಯನ್ನು ಸರ್ಕಾರವು ವಿನಂತಿಸುತ್ತದೆ.

ಬೆಂಗಳೂರು ಮಹಾನಗರ ಪಾಲಿಕೆಯ ಸದಸ್ಯರುಗಳಿಗೆ ಬಿ.ಡಿ.ಎ. ನಿವೇಶನ ನೀಡುವುದು

201 - ಶ್ರೀ ಆರ್. ಕೃಷ್ಣಪ್ಪ (ಜಯಮಹಲ್) : ಮಾನ್ಯ ಮುಖ್ಯಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬೆಂಗಳೂರು ಮಹಾನಗರ ಪಾಲಿಕೆಯ ಸದಸ್ಯರುಗಳಿಗೆ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದಿಂದ ನಿವೇಶನಗಳನ್ನು ನೀಡಬೇಕೆಂದು ಮಹಾನಗರ ಪಾಲಿಕೆಯ ನಿರ್ಣಯವನ್ನು ಸರ್ಕಾರಕ್ಕೆ ಕಳುಹಿಸಲಾಗಿದೆಯೇ?

ಆ) ಹಾಗಿದ್ದರೆ, ಸರ್ಕಾರದವರು ಕೈಗೊಳ್ಳಲಿರುವ ಕ್ರಮಗಳೇನು?

ಶ್ರೀ ಹೆಚ್.ಡಿ. ದೇವೇಗೌಡ (ಮುಖ್ಯಮಂತ್ರಿಗಳು) :

ಅ) ಹೌದು.

ಆ) ಇದು ಸರ್ಕಾರದ ಪರಿಶೀಲನೆಯಲ್ಲಿದೆ.